## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಮತ್ತು ಇತರೆ 5 ಗ್ರಾಮಗಳ ಹಾಗೂ ವಳಂಬಿಗೆ ಮತ್ತು ಇತರೆ 8 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:17.09.2012 ರಂದು ನಡೆದ SLSSC ಸಭೆಯ ನಡವಳಿಗಳು.
2. ಮುಖ್ಯ ಇಂಜಿನಿಯರ್, PREDರವರ ಪತ್ರ ಸಂಖ್ಯೆ:ಮುಇಂ/ಪಂರಾಇಂಇ/ತ್ವಗ್ರಾನೀಸ-1/ತಾಂಸ-1/ಸಇಂ-6/2012-13/12595 ದಿನಾಂಕ:15.02.2013.

–

**ಪೀಠಿಕೆ:**

ದಿನಾಂಕ:17.09.2012ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಮತ್ತು ಇತರೆ 5 ಗ್ರಾಮಗಳ ಹಾಗೂ ವಳಂಬಿಗೆ ಮತ್ತು ಇತರೆ 8 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಪೂರೈಕೆ ಯೋಜನೆಗಳಿಗೆ ತಾತ್ವಿಕ ಅನುಮೋದನೆ ನೀಡಲಾಗಿದೆ. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆರವರು ಉದ್ದೇಶಿತ ಯೋಜನೆಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ. 2012-13ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ NRDWP - Coverage & WQ ಘಟಕದಡಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ಗ್ರಾನೀಸ(5) 2012 ಬೆಂಗಳೂರು, ದಿನಾಂಕ:15.02.2013**

ಪೀಠಿಕೆಯಲ್ಲಿನ ಅಂಶಗಳನ್ನು ಪರಿಶೀಲಿಸಿ, ದಿನಾಂಕ:17.09.2012ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ತಾತ್ವಿಕ ಒಪ್ಪಿಗೆ ಪಡೆದಿರುವ ಹಾಸನ ಜಿಲ್ಲೆ, ಹೊಳೆನರಸೀಪುರ ತಾಲ್ಲೂಕಿನ ಪಡುವಲಹಿಪ್ಪೆ ಮತ್ತು ಇತರೆ 5 ಗ್ರಾಮಗಳ **ರೂ.446.00 ಲಕ್ಷ (ನಾಲ್ಕು ನೂರ ನಲವತ್ತಾರು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜಿನ ಮತ್ತು ವಳಂಬಿಗೆ ಮತ್ತು ಇತರೆ 8 ಗ್ರಾಮಗಳ **ರೂ.435.00ಲಕ್ಷ (ನಾಲ್ಕು ನೂರ ಮೂವತ್ತೈದು ಲಕ್ಷ ರೂಪಾಯಿಗಳು ಮಾತ್ರ)** ಅಂದಾಜಿನ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳಿಗೆ ಅನುಷ್ಠಾನ ಮತ್ತು ನಂತರದ 5 ವರ್ಷಗಳ O&M ಸಲುವಾಗಿ ಆಯಾಯ ಯೋಜನೆಗಳ ಅಂದಾಜು ಘೋಷ್ವಾರೆಯನ್ವಯ NRDWP (Coverage & WQ)ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:

(ಅ) ಅನುಮೋದಿತ ಬಹುಗ್ರಾಮ ಕುಡಿಯುವ ನೀರಿನ ಕಾರ್ಯಕ್ರಮದ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

(ಆ) ಈ ಆದೇಶದಡಿ ಅನುಮೋದನೆಯಾದ ಯೋಜನೆಗಳಿಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/PRED ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. ಇವುಗಳಿಗಾಗಿ 2012-13ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಗಳನ್ನು ಅನುಷ್ಠಾನಗೊಳಿಸಬೇಕು.

(ಇ) ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು ಮತ್ತು ಯೋಜನೆಯ ಅನುಷ್ಠಾನವನ್ನು ಕಡ್ಡಾಯವಾಗಿ 3rd Party Inspectionಗೆ ಒಳಪಡಿಸುವುದು.

(ಈ) ಈ ಯೋಜನೆಗಳ ಬಂಡವಾಳ ಹೂಡಿಕೆ ಕೇಂದ್ರ ಮತ್ತು ರಾಜ್ಯ ವಲಯದ NRDWP ಯೋಜನೆಯಡಿ ಕ್ರಮವಾಗಿ 50:50 ಅನುಪಾತದಲ್ಲಿರುತ್ತದೆ.

(ಉ) ಈ ಯೋಜನೆಗಳಿಗೆ ತಗಲುವ ಅನುಮೋದಿತ ಅಂದಾಜು ವೆಚ್ಚದ ವ್ಯಾಪ್ತಿಯೊಳಗೆ ಗುತ್ತಿಗೆ ನೀಡಿದ 11 ತಿಂಗಳೊಳಗಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ಯೋಜನೆಯನ್ನು ಕಾರ್ಯಗತಗೊಳಿಸತಕ್ಕದ್ದು. ಈಗ ಅನುಮೋದನೆಯಾದ ಕ್ರಿಯಾ ಯೋಜನೆಯ ಅಂದಾಜು ವೆಚ್ಚದಲ್ಲಿ ಹೆಚ್ಚಳವಾಗದಂತೆ ಎಲ್ಲಾ ಆಡಳಿತಾತ್ಮಕ ಹಾಗೂ ತಾಂತ್ರಿಕ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

(ಊ) KTPP ನೀತಿಯನ್ವಯ ಹೊರಗುತ್ತಿಗೆ ಆಧಾರದ ಮೇಲೆ ಯೋಜನೆಯನ್ನು ಅನುಷ್ಠಾನಗೊಳಿಸಬೇಕು.

(ಋ) ಯೋಜನೆ ಅನುಷ್ಠಾನಗೊಂಡ ನಂತರ ಅವುಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಪಾರದರ್ಶಕ ನೀತಿಯನ್ವಯ ಆಯ್ಕೆ ಮಾಡಿದ ಸರ್ಕಾರೇತರ ಸಂಸ್ಥೆ / ಸಂಬಂಧಪಟ್ಟ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಮುಖೇನ O&M ವ್ಯವಸ್ಥೆಮಾಡತಕ್ಕದ್ದು.

(ಎ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣೆಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

(ಏ) ನೀರೆತ್ತುವ ಪ್ರಮಾಣವನ್ನು ಸೂಕ್ತ ರೀತಿಯಲ್ಲಿ ಅಳತೆ ಮಾಡುವ ಸಲುವಾಗಿ ಅಗತ್ಯ ಮಾಪಕವನ್ನು ನದಿಯ ಹತ್ತಿರ / ಜಲಾಶಯದ ಬಳಿ ಅಳವಡಿಸಿಕೊಳ್ಳತಕ್ಕದ್ದು ಹಾಗೂ ತತ್ಸಂಬಂಧದ ಬಾಬ್ತಿನ ವೆಚ್ಚವನ್ನು ಭರಿಸಲು PRED ಮತ್ತು ಜಿಲ್ಲಾ ಪಂಚಾಯತ್ ಆಯವ್ಯಯದಲ್ಲಿ ಅಗತ್ಯವಿರುವ ಪ್ರಾವಧಾನ ಮಾಡಿಕೊಳ್ಳಬೇಕು.

3. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ IFA ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 13 ಆಂಅಸ 2012 ದಿ:02.04.2012ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಉಪ ಮುಖ್ಯಮಂತ್ರಿಗಳವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂ.
9. ವಿಶೇಷಾಧಿಕಾರಿಗಳು (ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ ಬೆಂ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಸಂಕೀರ್ಣ,ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು.-20.
12. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಹಾಸನ.**
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, **ಹಾಸನ.**
14. ಅಧೀಕ್ಷಕ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿ, **ಮೈಸೂರು.**
15. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, **ಹಾಸನ.** ಚನ್ನರಾಯಪಟ್ಟಣ
16. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
17. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
19. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು/ ಅಪರ ನಿರ್ದೇಶಕರು, (ಆರ್ಥಿಕ) KRWSSA/SWSM/ ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ, ಇವರುಗಳ ಆಪ್ತ ಸಹಾಯಕರು.
20. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
22. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
23. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ಗ್ರಾನೀಸ(5)12, ದಿನಾಂಕ: 15.02.2013ರ ಲಗತ್ತು

## ABSTRACT ESTIMATE

**NAME OF WORK: Water Supply Scheme to Paduvalahippe & other 5 villages**

District: Hassan
Taluk: Holenarasipura

| Sl.No. | Description | Amount (Rs. in lakhs) |
|---|---|---|
| 1 | Head Works | 46.58 |
| 2 | Raw Water Rising / Gravity Main & Pumping Machinery | 48.56 |
| 3 | Impounding Reservoir - Capacity | - |
| 4 | Water Treatment Plant - Capacity 0.65 MLD | 85.21 |
| 5 | Pure Water Rising / Gravity Main and Pumnping Machinery etc. | 76.31 |
| 6 | Balancing Tanks / ZBR / OHTs etc | 43.21 |
| 7 | Chemical Rooms, Laboratory,Staff Quarters | 10.00 |
| 8 | Express Feeder Line | 3.16 |
| 9 | Add 2% towards DPR preparation charges | 8.00 |
| 10 | Contingencies,Escalation and unforeseen items | 34.97 |
| | **Sub-Total** | **356.00** |
| 12 | O&M charges for 5 Years | 90.00 |
| | **GRAND TOTAL** | **446.00** |

Technically Scrutinised based on D.S.R.

Chief Engineer,
Panchayat Raj Engineering Department
Bangalore.

"ಅನುಮೋದಿಸಿದೆ"

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 173 ಗ್ರಾನೀಸ(5) 12, ದಿನಾಂಕ: 15.02.2013ರ ಲಗತ್ತು

**ABSTRACT ESTIMATE**

**NAME OF WORK: WATER SUPPLY SCHEME TO Valambige & other 8 villages**

District: Hassan
Taluk: Holenarasipura

| Sl.No. | Description | Amount (Rs. in lakhs) |
|---|---|---|
| 1 | Head Works | 50.32 |
| 2 | Raw Water Rising / Gravity Main & Pumping Machinery | 37.19 |
| 3 | Impounding Reservoir - Capacity | - |
| 4 | Water Treatment Plant - Capacity | 85.22 |
| 5 | Pure Water Rising / Gravity Main and Pumnping Machinery etc. | 87.73 |
| 6 | Balancing Tanks / ZBR / OHTs etc | 53.73 |
| 7 | Chemical Rooms, Laboratory,Staff Quarters | 9.81 |
| 8 | Express Feeder Line | 3.00 |
| 9 | Add 2% towards DPR preparation charges | 8.00 |
| 10 | Contingencies,Escalation and unforeseen items | 15.00 |
| | **SUB-TOTAL** | **350.00** |
| 11 | O&M charges for 5 Years | 85.00 |
| | **TOTAL** | **435.00** |

Technically Scrutinised based on D.S.R.

Chief Engineer,
Panchayat Raj Engineering Department
Bangalore.

ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ